# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 255
ಉತ್ತರಿಸಬೇಕಾದ ದಿನಾಂಕ : 06.03.2025
ಸದಸ್ಯರ ಹೆಸರು : ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ (ವಿಧಾನ ಸಭೆಯಿಂದ ಚುನಾಯಿತರಾದವರು)
ಉತ್ತರಿಸುವ ಸಚಿವರು : ಮಾನ್ಯ ಮುಖ್ಯಮಂತ್ರಿಯವರು

| ಕ್ರಸ | ಪ್ರಶ್ನೆ | ಉತ್ತರ |
|---|---|---|
| ಅ) | ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಪ್ರಸ್ತುತ ಒಟ್ಟು ಎಷ್ಟು ಕ್ರೀಡಾ ಹಾಸ್ಟೆಲ್‌ಗಳು ಕಾರ್ಯ ನಿರ್ವಹಿಸುತ್ತಿವೆ ಹಾಗೂ ಸದರಿ ಕ್ರೀಡಾ ಹಾಸ್ಟೆಲ್‌ಗಳಿಗೆ ಮಂಜೂರಾಗಿರುವ ಹಾಲಿ ಕರ್ತವ್ಯ ನಿರ್ವಹಿಸುತ್ತಿರುವ ಹಾಗೂ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು; (ವಿವರ ನೀಡುವುದು) | ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಪ್ರಸ್ತುತ ಒಂದು ಕ್ರೀಡಾ ಹಾಸ್ಟೆಲ್ ಮಂಗಳೂರಿನಲ್ಲಿ ಕಾರ್ಯನಿರ್ವಹಿಸುತ್ತಿದೆ. ಸದರಿ ಕ್ರೀಡಾ ವಸತಿ ನಿಲಯಕ್ಕೆ ಯಾವುದೇ ಖಾಯಂ ಹುದ್ದೆಗಳು ಮಂಜೂರಾಗಿರುವುದಿಲ್ಲ ಹಾಗೂ ಯಾವುದೇ ಹುದ್ದೆಗಳು ಖಾಲಿ ಇರುವುದಿಲ್ಲ.<br>ಕರ್ನಾಟಕ ಕ್ರೀಡಾ ಪ್ರಾಧಿಕಾರದ ಒಬ್ಬ ಅಥ್ಲೆಟಿಕ್ಸ್ ತರಬೇತುದಾರರು ಈ ಕ್ರೀಡಾ ವಸತಿ ನಿಲಯದಲ್ಲಿ ಕಾರ್ಯ ನಿರ್ವಹಿಸುತ್ತಿದ್ದಾರೆ.<br>ಪ್ರಸ್ತುತ ಕ್ರೀಡಾ ವಸತಿ ನಿಲಯದಲ್ಲಿ ಒಬ್ಬರು ಕ್ಷೇಮಪಾಲಕರು, ಒಬ್ಬರು ಸ್ವಚ್ಛತಾಗಾರರು ಹಾಗೂ ಇಬ್ಬರು ಕಾವಲುಗಾರರು ಸೇರಿದಂತೆ ಒಟ್ಟು 4 ಸಿಬ್ಬಂದಿಗಳು ಹೊರಗುತ್ತಿಗೆ ಆಧಾರದ ಮೇಲೆ ಕರ್ತವ್ಯ ನಿರ್ವಹಿಸುತ್ತಿದ್ದಾರೆ. |
| ಆ) | ಈ ಎಲ್ಲಾ ಕ್ರೀಡಾ ಹಾಸ್ಟೆಲ್‌ಗಳು ಸ್ವಂತ ಕಟ್ಟಡ ಹೊಂದಿವೆಯೆ; ಹಾಗೂ ಅವುಗಳಲ್ಲಿ ಎಲ್ಲಾ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲಾಗಿದೆಯೇ; | ಮಂಗಳೂರಿನಲ್ಲಿ ಕಾರ್ಯನಿರ್ವಹಿಸುತ್ತಿರುವ ಕ್ರೀಡಾ ವಸತಿ ನಿಲಯವು ಬಾಲಕ:ಬಾಲಕಿಯರಿಗೆ ಪ್ರತ್ಯೇಕ ವಸತಿ ವ್ಯವಸ್ಥೆ ಇರುವ ಸ್ವಂತ ಕಟ್ಟಡಗಳನ್ನು ಹೊಂದಿದೆ.<br><br>ಸದರಿ ಕ್ರೀಡಾ ವಸತಿ ನಿಲಯದಲ್ಲಿ ವಸತಿ ಕೊಠಡಿಗಳು, ಭೋಜನಾಲಯ, ವಿದ್ಯುತ್, ನೀರು, ಶೌಚಾಲಯ, ಸ್ನಾನಗೃಹ ಮತ್ತಿತರ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲಾಗಿದೆ ಹಾಗೂ ಮಂಚ, ಹಾಸಿಗೆ, ಹೊದಿಕೆಗಳು, ಕುಡಿಯುವ ನೀರು, ಸೋಲಾರ್ ವಾಟರ್ ಹೀಟರ್, ವಾಷಿಂಗ್ ಮೆಷೀನ್, ಡೈನಿಂಗ್ ಟೇಬಲ್, ಸಿ.ಸಿ.ಟಿ.ವಿ. ಕಣ್ಗಾವಲು ವ್ಯವಸ್ಥೆ ಕಲ್ಪಿಸಲಾಗಿದೆ. ಕಾವಲುಗಾರರು, ಕ್ಷೇಮಪಾಲಕರು ಮತ್ತು ಸ್ವಚ್ಛತಾಗಾರರ ಸೇವೆಯನ್ನು ಹೊರಗುತ್ತಿಗೆ ಆಧಾರದ ಮೇಲೆ ಪಡೆಯಲಾಗಿದೆ. |



File No. YSD-EBB/15/2025-YSD_DO-YOUTH SEC (Computer No. 1698613)
File No. YSD-EPE/239/2026-YSD_DO-YOUTH SEC (Computer No. 2177680) DESK OFFICER, YOUTH SEC on 16/05/2026 12:54 PM
Generated from eOffice by PANKAJA M, YSD-DO-SO(PM), DESK OFFICER, YOUTH SEC

| | | |
|---|---|---|
| ಇ) | ಸದರಿ ಕ್ರೀಡಾ ಹಾಸ್ಟೆಲ್‌ಗಳಲ್ಲಿ ಪ್ರಸ್ತುತ ಇರುವ ದಾಖಲಾತಿ ಸಾಮರ್ಥ್ಯವೆಷ್ಟು; ಹಾಗೂ ದಾಖಲಾಗಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು; | ಮಂಗಳೂರಿನ ಕ್ರೀಡಾ ವಸತಿ ನಿಲಯದಲ್ಲಿ 50 ವಿದ್ಯಾರ್ಥಿಗಳ ದಾಖಲಾತಿ ಸಾಮರ್ಥ್ಯವಿರುತ್ತದೆ. ಪ್ರಸ್ತುತ 26 ಬಾಲಕರು ಹಾಗೂ 18 ಬಾಲಕಿಯರು ಸೇರಿದಂತೆ ಒಟ್ಟು 44 ಕ್ರೀಡಾಪಟುಗಳು ದಾಖಲಾಗಿರುತ್ತಾರೆ. |
| ಈ) | ಸದರಿ ಕ್ರೀಡಾ ಹಾಸ್ಟೆಲ್‌ಗಳಲ್ಲಿ ದಾಖಲಾಗಿರುವ ವಿದ್ಯಾರ್ಥಿಗಳಿಗೆ ದೊರೆಯುತ್ತಿರುವ ಸೌಲಭ್ಯಗಳು ಹಾಗೂ ತರಬೇತಿಗಳು ಯಾವುವು? (ವಿವರ ನೀಡುವುದು) | ಮಂಗಳೂರಿನ ಕ್ರೀಡಾ ವಸತಿ ನಿಲಯದಲ್ಲಿ ದಾಖಲಾಗಿರುವ ಕ್ರೀಡಾಪಟುಗಳಿಗೆ ಉಚಿತ ವಸತಿ, ಊಟೋಪಹಾರ, ಕ್ರೀಡಾ ಸಮವಸ್ತ್ರ, ಕ್ರೀಡಾಕೂಟಗಳಲ್ಲಿ ಭಾಗವಹಿಸಲು ಪ್ರಯಾಣ ಭತ್ಯೆ/ದಿನ ಭತ್ಯೆ ಸೌಲಭ್ಯ ಒದಗಿಸಲಾಗುತ್ತಿದೆ. ವೈಜ್ಞಾನಿಕ ಕ್ರೀಡಾ ತರಬೇತಿಗೆ ಅಗತ್ಯವಾದ ಕ್ರೀಡಾ ಮೂಲಸೌಕರ್ಯಗಳನ್ನು ಒದಗಿಸಲಾಗುತ್ತಿದೆ. ರಾಷ್ಟ್ರೀಯ ಹಾಗೂ ಅಂತರ-ರಾಷ್ಟ್ರೀಯ ಮಟ್ಟದ ಕ್ರೀಡಾಕೂಟಗಳಲ್ಲಿ ವಿಜೇತರಾದ ಕ್ರೀಡಾಪಟುಗಳಿಗೆ ನಗದು ಪ್ರೋತ್ಸಾಹಧನ ನೀಡಲಾಗುತ್ತಿದೆ. |

ವೈಎಸ್ ಡಿ-ಇಬಿಬಿ/15/2025

(ಸಿದ್ದರಾಮಯ್ಯ)
ಮುಖ್ಯಮಂತ್ರಿ



File No. YSD-EBB/15/2025-YSD_DO-YOUTH SEC (Computer No. 1698613)
File No. YSD-EPE/239/2026-YSD_DO-YOUTH SEC (Computer No. 2177880)
Generated from eOffice by PANKAJA M, YSD-DO-SO(PM), DESK OFFICER, YOUTH SEC, on 16/05/2026 12:54 PM